# All India Radio: Bangalore
# National Bulletin In Kannada

## ಆಕಾಶವಾಣಿ, ಬೆಂಗಳೂರು

## ರಾಷ್ಟ್ರೀಯ ವಾರ್ತೆಗಳು

**01.01.2026** **19.35 p.m.**

***************

ಮುಖ್ಯಾಂಶಗಳು

- ಕೃತಕ ಬುದ್ಧಿಮತ್ತೆಯಿಂದ ದೇಶದಲ್ಲಿ ಸಕಾರಾತ್ಮಕ ಬದಲಾವಣೆ - ರಾಷ್ಟ್ರಪತಿ ದ್ರೌಪದಿ ಮುರ್ಮು ವಿಶ್ವಾಸ
- ಬದಲಾಗುತ್ತಿರುವ ಕಾಲಕ್ಕೆ ತಕ್ಕಂತೆ ರಕ್ಷಣಾ ಉತ್ಪನ್ನಗಳನ್ನು ಅಭಿವೃದ್ಧಿ ಪಡಿಸುವಂತೆ ಡಿಆರ್‌ಡಿಒಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಕರೆ
- ಶೀಘ್ರದಲ್ಲೇ ಕೊಲ್ಕತ್ತಾ-ಗುವಾಹಟಿ ನಡುವೆ ದೇಶದ ಮೊದಲ ವಂದೇ ಭಾರತ್ ಸ್ಲೀಪರ್ ರೈಲಿಗೆ ಚಾಲನೆ - ರೈಲ್ವೆ ಸಚಿವ ಅಶ್ವಿನಿ ವೈಷ್ಣವ್
- ಹೊಸ ವರ್ಷಾಚರಣೆ ಸಂದರ್ಭದಲ್ಲಿ ರಷ್ಯಾ ಮೇಲೆ ಉಕ್ರೇನ್ ಡ್ರೋನ್ ದಾಳಿ; ೨೪ ಮಂದಿ ಸಾವು

***************

ಕೃತಕ ಬುದ್ಧಿಮತ್ತೆ ಕೇವಲ ತಂತ್ರಜ್ಞಾನವಲ್ಲ. ಬದಲಾಗಿ ದೇಶದಲ್ಲಿ ಸಕಾರಾತ್ಮಕ ಬದಲಾವಣೆಗಳನ್ನು ತರುವ ಅವಕಾಶವಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.

ರಾಷ್ಟ್ರಪತಿ ಭವನದಲ್ಲಿ ಇಂದು ಡಿಜಿಟಲ್-ಸ್ಕಿಲಿಂಗ್ ಫಾರ್ ಎಐ ರೆಡಿನೆಸ್ ಅಡಿಯಲ್ಲಿ ನಡೆದ ವಿಶೇಷ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಕೃತಕ ಬುದ್ಧಿಮತ್ತೆಯ ಮಹತ್ವವು ವಿವಿಧ ಕ್ಷೇತ್ರಗಳಲ್ಲಿ ವೇಗವಾಗಿ ಬೆಳೆಯುತ್ತಿದೆ ಮತ್ತು ಪ್ರತಿಯೊಬ್ಬರೂ ತಂತ್ರಜ್ಞಾನವನ್ನು ಕಲಿಯುವುದು ಅತ್ಯಗತ್ಯವಾಗಿದೆ ಎಂದರು.

ಉದಯೋನ್ಮುಖ ತಂತ್ರಜ್ಞಾನಗಳ ಬಗ್ಗೆ ಕಲಿಯಲು ಮತ್ತು ಅವುಗಳನ್ನು ತಮ್ಮ ನಾಯಕತ್ವದ ಪಾತ್ರಗಳಲ್ಲಿ ಬಳಸುವ ಮೂಲಕ ಮಾದರಿಯಾಗಿರುವುದಕ್ಕೆ ಸಂಸತ್ ಸದಸ್ಯರನ್ನು ಇದೇ ವೇಳೆ ರಾಷ್ಟ್ರಪತಿಯವರು ಶ್ಲಾಘಿಸಿದರು.

ಈ ಉಪಕ್ರಮದ ಉದ್ದೇಶವು ಎಐ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ಆರ್ಥಿಕ ಸ್ವಾವಲಂಬನೆಯನ್ನು ಬೆಳೆಸುವುದಾಗಿದೆ. ಲಕ್ಷಾಂತರ ಕಲಿಕಾರ್ಥಿಗಳನ್ನು ಸಬಲೀಕರಣಗೊಳಿಸುವಲ್ಲಿ, ಅವರ ಕೌಶಲ್ಯಗಳನ್ನು ಹೆಚ್ಚಿಸುವಲ್ಲಿ ಮತ್ತು ದೇಶದಲ್ಲಿ ಭವಿಷ್ಯಕ್ಕೆ

ಸಿದ್ಧವಾಗಿರುವ ಕಾರ್ಯಪಡೆಯನ್ನು ಸಿದ್ಧಪಡಿಸುವಲ್ಲಿ ಈ ಉಪಕ್ರಮ ನಿರ್ಣಾಯಕವಾಗಲಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು.

***************

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಇಂದು ನವದೆಹಲಿಯಲ್ಲಿರುವ ಬಾಂಗ್ಲಾದೇಶದ ಹೈಕಮಿಷನ್‌ಗೆ ಭೇಟಿ ನೀಡಿದರು.

ಬಾಂಗ್ಲಾದೇಶದ ಮಾಜಿ ಪ್ರಧಾನಿ ಮತ್ತು ಬಿಎನ್‌ಪಿ ಅಧ್ಯಕ್ಷೆ ಬೇಗಂ ಖಲೀದಾ ಜಿಯಾ ಅವರ ನಿಧನಕ್ಕೆ ಸಂತಾಪ ಸೂಚಿಸಿರುವ ರಕ್ಷಣಾ ಸಚಿವರು, ಭಾರತದ ಆಲೋಚನೆಗಳು ಅವರ ಕುಟುಂಬ ಮತ್ತು ಬಾಂಗ್ಲಾದೇಶದ ಜನರೊಂದಿಗೆ ಇವೆ ಎಂದು ಸಾಮಾಜಿಕ ಜಾಲತಾಣದಲ್ಲಿ ಹೇಳಿದ್ದಾರೆ.

***************

ಆಪರೇಷನ್ ಸಿಂಧೂರ ಸಮಯದಲ್ಲಿ ಡಿಆರ್‌ಡಿಒ ಅಭಿವೃದ್ಧಿ ಪಡಿಸಿದ ಶಸ್ತ್ರಾಸ್ತ್ರಗಳು ವಹಿಸಿದ ನಿರ್ಣಾಯಕ ಪಾತ್ರವು ರಾಷ್ಟ್ರೀಯ ಹಿತಾಸಕ್ತಿ ಕಾಪಾಡುವಲ್ಲಿ ಸಂಸ್ಥೆಯ ಬದ್ಧತೆಗೆ ಸಾಕ್ಷಿಯಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.

ನವದೆಹಲಿಯಲ್ಲಿಂದು ಡಿಆರ್‌ಡಿಒ ಪ್ರಧಾನ ಕಚೇರಿಯ ೬೮ನೇ ಸಂಸ್ಥಾಪನಾ ದಿನದ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಸಶಸ್ತ್ರ ಪಡೆಗಳನ್ನು ಅತ್ಯಾಧುನಿಕ ತಂತ್ರಜ್ಞಾನದೊಂದಿಗೆ ಸಜ್ಜುಗೊಳಿಸುವ ಮೂಲಕ ಭಾರತದ ದೇಶೀಯ ಸಾಮರ್ಥ್ಯವನ್ನು ಬಲಪಡಿಸಿದ್ದಕ್ಕಾಗಿ ಡಿಆರ್‌ಡಿಒ ಸಂಸ್ಥೆಯನ್ನು ಶ್ಲಾಘಿಸಿದರು.

ಮುಂದಿನ ದಶಕದಲ್ಲಿ ಸಂಪೂರ್ಣ ವೈಮಾನಿಕ ರಕ್ಷಣೆಯನ್ನು ಖಚಿತಪಡಿಸಿಕೊಳ್ಳಲು ವಾಯು ರಕ್ಷಣಾ ವ್ಯವಸ್ಥೆಯೊಂದಿಗೆ ಪ್ರಮುಖ ಸಾಧನಗಳ ಸಜ್ಜುಗೊಳಿಸುವ ಜವಾಬ್ದಾರಿಯನ್ನು ಡಿಆರ್‌ಡಿಒ ಹೊಂದಿದೆ ಎಂದು ಅವರು ಹೇಳಿದರು.

ವೇಗವಾಗಿ ವಿಕಸನಗೊಳ್ಳುತ್ತಿರುವ ತಾಂತ್ರಿಕ ಪರಿಸರ ವ್ಯವಸ್ಥೆಯೊಂದಿಗೆ ಸಮನ್ವಯದಿಂದ ಮುಂದುವರೆಯಲು ಮತ್ತು ಬದಲಾಗುತ್ತಿರುವ ಕಾಲಕ್ಕೆ ಪ್ರಸ್ತುತವಾಗಿರುವ ರಕ್ಷಣಾ ಉತ್ಪನ್ನಗಳನ್ನು ಅಭಿವೃದ್ಧಿಪಡಿಸುವಂತೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಡಿಆರ್‌ಡಿಒಗೆ ಕರೆ ನೀಡಿದರು.

***************

ಕೊಲ್ಕತ್ತಾ ಮತ್ತು ಗುವಾಹಟಿ ನಡುವೆ ವಂದೇ ಭಾರತ್ ಸ್ಲೀಪರ್ ರೈಲಿಗೆ ಪ್ರಧಾನಿ ನರೇಂದ್ರ ಮೋದಿ ಶೀಘ್ರದಲ್ಲೇ ಚಾಲನೆ ನೀಡಲಿದ್ದಾರೆ. ದೇಶದ ಮೊದಲ ವಂದೇ ಭಾರತ್ ಸ್ಲೀಪರ್ ರೈಲು ಶೀಘ್ರದಲ್ಲೇ ಸಂಚಾರ ಆರಂಭಿಸಲಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಘೋಷಿಸಿದ್ದಾರೆ.

ನವದೆಹಲಿಯಲ್ಲಿಂದು ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಚಿವರು, ಮುಂದಿನ ೧೫ ರಿಂದ ೨೦ ದಿನಗಳಲ್ಲಿ ಮೊದಲ ವಂದೇ ಭಾರತ್ ಸ್ಲೀಪರ್ ರೈಲನ್ನು ಲೋಕಾರ್ಪಣೆಗೊಳಿಸಲಾಗುತ್ತದೆ. ಭಾರತೀಯ ರೈಲ್ವೆ ಸ್ಥಳೀಯವಾಗಿ ವಿನ್ಯಾಸಗೊಳಿಸಿ, ತಯಾರಿಸಿದ ಈ ರೈಲಿನ ಅಂತಿಮ ಹೈಸ್ಪೀಡ್ ಪ್ರಾಯೋಗಿಕ ಪರೀಕ್ಷೆ ಪೂರ್ಣಗೊಂಡಿದೆ ಎಂದು ತಿಳಿಸಿದ್ದಾರೆ.

ಒಂದು ಸಾವಿರದಿಂದ ೧ ಸಾವಿರದ ೫೦೦ ಕಿಲೋಮೀಟರ್‌ವರೆಗಿನ ದೂರದ ಪ್ರಯಾಣಕ್ಕೆ ಅನುಗುಣವಾಗಿ ೧೬ ಬೋಗಿಗಳ ವಂದೇ ಭಾರತ್ ಸ್ಲೀಪರ್ ರೈಲನ್ನು ಅಭಿವೃದ್ಧಿಪಡಿಸಲಾಗಿದೆ. ರೈಲಿನಲ್ಲಿ ಆರಾಮದಾಯಕ ಸ್ಲೀಪರ್ ಬರ್ತ್‌ಗಳು, ಸ್ವಯಂಚಾಲಿತ ಬಾಗಿಲುಗಳು, ಆಧುನಿಕ ಶೌಚಾಲಯಗಳು ಸೇರಿದಂತೆ ಅತ್ಯಾಧುನಿಕ ಪ್ರಯಾಣಿಕರ ಸೌಲಭ್ಯಗಳನ್ನು ಈ ರೈಲು ಹೊಂದಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಮಾಹಿತಿ ನೀಡಿದ್ದಾರೆ.

***************

೨೦೨೫ನೇ ವರ್ಷವು ಭಾರತದ ಅಭಿವೃದ್ಧಿ ಪ್ರಯಾಣದಲ್ಲಿ ನಿರ್ಣಾಯಕ ಅಧ್ಯಯನವಾಗಿದೆ. ನೀತಿಗಳು ಪ್ರಗತಿಯಾಗಿವೆ. ಮತ್ತು ಉದ್ದೇಶಗಳು ಪರಿಣಾಮಕಾರಿಯಾಗಿ ರೂಪಾಂತರವಾಗಿವೆ. ವಿಶೇಷ ಸರಣಿ 'ಸುಧಾರಣೆಗಳ ವರ್ಷದಲ್ಲಿ ೨೦೨೫ ಭಾರತೀಯ ಕ್ರೀಡೆಗಳಿಗೆ ಹೇಗೆ ಸ್ಫೂರ್ತಿದಾಯಕ ವರ್ಷವಾಗಿತ್ತು ಎಂಬುದರ ಕುರಿತು ವಿಶೇಷ ವರದಿ ಇದೀಗ ಮೂಡಿಬರಲಿದೆ.

ಧ್ವನಿ: ಲಿಂಗಾನಂದ

***************

ಭಾರತ ಮತ್ತು ಪಾಕಿಸ್ತಾನ ದೇಶಗಳು ಇಂದು ಪರಮಾಣು ಸ್ಥಾಪನೆ ಮತ್ತು ಸೌಲಭ್ಯಗಳ ಮೇಲಿನ ದಾಳಿ ನಿಷೇಧ ಒಪ್ಪಂದದ ಅಡಿಯಲ್ಲಿ ಪರಮಾಣು ಸ್ಥಾಪನೆ ಮತ್ತು ಸೌಲಭ್ಯಗಳ ಪಟ್ಟಿಯನ್ನು ವಿನಿಮಯ ಮಾಡಿಕೊಂಡಿವೆ.

ರಾಜತಾಂತ್ರಿಕ ಮಾರ್ಗಗಳ ಮೂಲಕ ಏಕಕಾಲದಲ್ಲಿ ಎರಡೂ ದೇಶಗಳು ಪರಸ್ಪರ ಪಟ್ಟಿಯನ್ನು ವಿನಿಮಯ ಮಾಡಿಕೊಂಡಿವೆ. ಒಪ್ಪಂದದ ಪ್ರಕಾರ ಎರಡೂ ದೇಶಗಳು ಪ್ರತಿವರ್ಷ ಜನವರಿ ೧ ರಂದು ಪರಮಾಣು ಸ್ಥಾಪನೆ ಮತ್ತು ಸೌಲಭ್ಯಗಳ ಬಗ್ಗೆ ಪರಸ್ಪರ ತಿಳಿಸುತ್ತವೆ.

೧೯೮೮ರ ಡಿಸೆಂಬರ್ ೩೧ ರಂದು ಈ ಒಪ್ಪಂದಕ್ಕೆ ಸಹಿ ಹಾಕಲಾಯಿತು. ೧೯೯೧ ರ ಜನವರಿ ೨೭ ರಂದು ಈ ಒಪ್ಪಂದ ಜಾರಿಗೆ ಬಂದಿತು ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

***************

ಭಾರತ ಮತ್ತು ಪಾಕಿಸ್ತಾನ ದೇಶಗಳುಇಂದು ರಾಜತಾಂತ್ರಿಕ ಮಾರ್ಗಗಳ ಮೂಲಕ ಪರಸ್ಪರ ಬಂಧನದಲ್ಲಿರುವ ಕೈದಿಗಳು ಮತ್ತು ಮೀನುಗಾರರ ಪಟ್ಟಿಯನ್ನು ವಿನಿಮಯ ಮಾಡಿಕೊಂಡಿವೆ.

ಭಾರತದ ಬಂಧನದಲ್ಲಿ ಪಾಕಿಸ್ತಾನದ ೩೯೧ ಕೈದಿಗಳು ಮತ್ತು ೩೩ ಮೀನುಗಾರರು ಇರುವ ಪಟ್ಟಿಯನ್ನು ಹಂಚಿಕೊಳ್ಳಲಾಗಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

ಇದೇ ವೇಳೆ, ಪಾಕಿಸ್ತಾನ ತನ್ನ ಬಂಧನದಲ್ಲಿರುವ ಭಾರತೀಯ ಪ್ರಜೆಗಳಾದ ೫೮ ಕೈದಿಗಳು ಮತ್ತು ೧೯೯ ಮೀನುಗಾರರ ವಿವರಗಳನ್ನು ಹಂಚಿಕೊಂಡಿದೆ.

ಶಿಕ್ಷೆಯನ್ನು ಪೂರ್ಣಗೊಳಿಸಿದ ೧೬೭ ಭಾರತೀಯ ಮೀನುಗಾರರು ಮತ್ತು ನಾಗರಿಕ ಕೈದಿಗಳ ಬಿಡುಗಡೆ ಮತ್ತು ವಾಪಸ್ಸಾತಿಯನ್ನು ತ್ವರಿತಗೊಳಿಸುವಂತೆ ಪಾಕಿಸ್ತಾನವನ್ನು ಕೋರಲಾಗಿದೆ.

***************

ರಷ್ಯಾದ ಖೇರ್‌ಸನ್ ಪ್ರದೇಶದ ಕೆಫೆ ಮತ್ತು ಹೋಟೆಲ್ ಮೇಲೆ ಉಕ್ರೇನ್ ಪಡೆಗಳು ನಡೆಸಿದ ಡ್ರೋನ್ ದಾಳಿಯಿಂದಾಗಿ ಕನಿಷ್ಠ ೨೪ ಜನ ಮೃತಪಟ್ಟಿದ್ದು, ೫೦ಕ್ಕೂ ಹೆಚ್ಚು ಜನ ಗಾಯಗೊಂಡಿದ್ದಾರೆ.

ಸ್ಥಳೀಯ ಜನರು ಹೊಸ ವರ್ಷಾಚರಣೆಯನ್ನು ಸಂಭ್ರಮಿಸುತ್ತಿರುವ ಸಂದರ್ಭದಲ್ಲಿ ಈ ದಾಳಿ ನಡೆದಿದೆ. ಇದೇ ವೇಳೆ, ರಷ್ಯಾದ ವಾಯು ರಕ್ಷಣಾ ವ್ಯವಸ್ಥೆಯು ವಿವಿಧ ಪ್ರದೇಶಗಳಲ್ಲಿ ಉಕ್ರೇನ್‌ನ ೧೬೮ ಡ್ರೋನ್‌ಗಳನ್ನು ನಾಶಪಡಿಸಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

***************

ನವದೆಹಲಿಯ ಆಕಾಶವಾಣಿ ಭವನದಲ್ಲಿಂದು ರಾಷ್ಟ್ರಿಯ ಗೀತೆ ವಂದೇ ಮಾತರಂನ ಎರಡು ಆವೃತ್ತಿಗಳನ್ನು ಪ್ರಸಾರ ಭಾರತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗೌರವ್ ದ್ವಿವೇದಿ ಬಿಡುಗಡೆ ಮಾಡಿದರು.

ವಂದೇ ಮಾತರಂನ ೧೫೦ನೇ ವಾರ್ಷಿಕೋತ್ಸವದ ಸ್ಮರಣಾರ್ಥ ಈ ಆವೃತ್ತಿಗಳನ್ನು ಡಿಜಿಟಲ್ ರೂಪದಲ್ಲಿ ಬಿಡುಗಡೆ ಮಾಡಲಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಗೌರವ್ ದ್ವಿವೇದಿ, ವಂದೇ ಮಾತರಂ ಕೇವಲ ಸ್ವಾತಂತ್ರ್ಯ ಚಳವಳಿಯ ಗೀತೆಯಲ್ಲ. ರಾಷ್ಟ್ರೀಯ ಏಕತೆ ಮತ್ತು ಸಮಗ್ರತೆಯ ಶಾಶ್ವತ ಸಂಕೇತವಾಗಿದೆ. ವಿವಿಧ ಸಂಗೀತ ಶೈಲಿಗಳಲ್ಲಿ ಪ್ರಸ್ತುತ ಪಡಿಸಲಾದ ಹಾಡಿನ ಈ ವಿಭಿನ್ನ ಆವೃತ್ತಿಗಳು ದೇಶದ ನಾಗರಿಕರ ಮೇಲೆ ಗಮನಾರ್ಹ ಪರಿಣಾಮ ಬೀರಿದೆ ಮತ್ತು ದೇಶದ ಸಾಂಸ್ಕೃತಿಕ ವೈವಿಧ್ಯತೆಯನ್ನು ಬಲಪಡಿಸುತ್ತದೆ ಎಂದು ಹೇಳಿದರು.

***************

ಏರ್ ಮಾರ್ಷಲ್ ನಾಗೇಶ್ ಕಪೂರ್ ಅವರು ಇಂದು ಭಾರತೀಯ ವಾಯುಪಡೆಯ ಉಪಮುಖ್ಯಸ್ಥರಾಗಿ ಅಧಿಕಾರ ವಹಿಸಿಕೊಂಡಿದ್ದಾರೆ. ೩೯ ವರ್ಷಗಳ ತಮ್ಮ ವೃತ್ತಿ ಜೀವನದಲ್ಲಿ ಅವರು ಭಾರತೀಯ ವಾಯುಪಡೆಯ ವಿವಿಧ ವಿಭಾಗಗಳಲ್ಲಿ ಕರ್ತವ್ಯ ನಿರ್ವಹಿಸಿದ್ದಾರೆ.

***************

ಗರ್ಭಿಣಿಯರು ಮತ್ತು ಹಾಲುಣಿಸುವ ತಾಯಂದಿರಿಗಾಗಿ ಕೇಂದ್ರ ಸರ್ಕಾರ  ಜಾರಿಗೆ ತಂದಿರುವ ಪ್ರಮುಖ ಯೋಜನೆಯಾದ ಪ್ರಧಾನಮಂತ್ರಿ ಮಾತೃವಂದನಾ ಯೋಜನೆ ಇಂದಿಗೆ ೯ ವರ್ಷಗಳನ್ನು ಪೂರೈಸಿದೆ.

ಗರ್ಭಿಣಿಯರು ಮತ್ತು ಹಾಲುಣಿಸುವ ತಾಯಂದಿರಿಗೆ ಅವರ ಆರೋಗ್ಯ ಮತ್ತು ಪೋಷಣೆಯನ್ನು ಸುಧಾರಿಸಲು ಆರ್ಥಿಕ ನೆರವು ನೀಡಲು ಈ ಯೋಜನೆಯನ್ನು ೨೦೧೭ರ ಜನವರಿ ೧ ರಂದು ಪ್ರಾರಂಭಿಸಲಾಯಿತು. ಈ ಯೋಜನೆಯಡಿಯಲ್ಲಿ ಗರ್ಭಿಣಿಯರು ಹಾಗೂ ಹಾಲುಣಿಸುವ ತಾಯಂದಿರು ಮೊದಲ ಮಗುವಿಗೆ ೫ ಸಾವಿರ ರೂಪಾಯಿ ಹಾಗೂ ಎರಡನೇ ಹೆಣ್ಣು ಮಗುವಿಗೆ ೬ ಸಾವಿರ ರೂಪಾಯಿಗಳ ನಗದು ಪ್ರಯೋಜನ ಪಡೆಯುತ್ತಾರೆ.

********ಮುಕ್ತಾಯ*******